ಅನುಬಂಧ–1

ದಿನಾಂಕ 07.07.2014ರ ಚುಕ್ಕೆ ರಹಿತ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು:

ಅಟಲ್‌ಜೀ ಸೇವಾ ಕೇಂದ್ರಗಳನ್ನು ಸ್ಥಾಪಿಸುವುದು

1024 (1744); ಶ್ರೀ ಐಹೊಳೆ ಡಿ. ಮಹಾಲಿಂಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಗ್ರಾಮೀಣದಲ್ಲಿ ಒಂದೇ ಅಟಲ್‌ಜೀ ಸೇವಾ ಕೇಂದ್ರವಿದ್ದು, ಇದರಿಂದ ಕ್ಷೇತ್ರದ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಪಹಣಿ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ರಾಯಭಾಗ ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗಲು ಇನ್ನೂ ಒಂದು ಸೇವಾ ಕೇಂದ್ರ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು.

ಇ) ರಾಯಭಾಗ ತಾಲ್ಲೂಕಿನ ಚಿಂಚಲಿ ಮತ್ತು ಕಂಕಣವಾಡಿ ಗ್ರಾಮಗಳಲ್ಲಿ ಹೆಚ್ಚುವರಿಯಾಗಿ ಹೊಸ ಅಟಲ್‌ಜೀ ಸೇವಾ ಕೇಂದ್ರ ಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವಾಗ ಸ್ಥಾಪಿಸಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ರಾಯಭಾಗ ತಾಲ್ಲೂಕಿನಲ್ಲಿ ಕುಡಚಿ ಮತ್ತು ಕಸಬಾ ಕೇಂದ್ರದಲ್ಲಿ ಎರಡು ನಾಡಕಛೇರಿಗಳು ಹಾಗೂ ಹುರಿಗೇರಿ ಮತ್ತು ಮೊಗಲ್‌ಕೋಡಿ ಗ್ರಾಮಗಳಲ್ಲಿ ಎರಡು ಹೆಚ್ಚುವರಿ ಮುಂಗಡ ಕಟ್ಟೆಗಳನ್ನು ಸ್ಥಾಪಿಸಲಾಗಿರುತ್ತದೆ. ಸದರಿ ಕೇಂದ್ರಗಳಲ್ಲಿ ಕಳೆದ ಒಂದು ವರ್ಷದಿಂದ ಸಾರ್ವಜನಿಕರಿಗೆ ಒಟ್ಟು 55,800 ಪಹಣಿ ಪತ್ರಿಕೆಗಳನ್ನು ಹಾಗೂ ವಿದ್ಯಾರ್ಥಿಗಳಿಗೆ ಒಟ್ಟು

701 ಜಾತಿ ಪ್ರಮಾಣ ಪತ್ರಗಳನ್ನು ಯಾವುದೇ ತೊಂದರೆ ಇಲ್ಲದೆ ವಿತರಿಸಲಾಗಿದೆ.

ಅಲ್ಲದೇ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಉದ್ದೇಶಕ್ಕಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಶಾಲಾ ಮುಖೇವೇ ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಾಲಾಗಿದ್ದು ಸದರಿ ಕಾರ್ಯಕ್ರಮವು ಅಂತಿಮ ಹಂತದಲ್ಲಿದೆ.

ಆ) ಆರ್ಥಿಕ ಇಲಾಖೆಯು ಇನ್ನು ಮುಂದೆ ಯಾವುದೇ ಹೆಚ್ಚುವರಿ ಅಟಲ್‌ಜೀ ಜನಸ್ನೇಹಿ ಕೇಂದ್ರಗಳನ್ನು ತೆರೆಯಬಾರದೆಂದು ಅಭಿಪ್ರಾಯ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಇ–ಆಡಳಿತ ಇಲಾಖೆಯಿಂದ ಆರಂಭಿಸ ಲಾಗುತ್ತಿರುವ ಸಾರ್ವಜನಿಕ ನಾಗರೀಕ ಕೇಂದ್ರಗಳಲ್ಲಿ ಅಟಲ್‌ಜೀ ಜನಸ್ನೇಹಿ ಕೇಂದ್ರಗಳ ಸೇವೆಗಳನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ.

ಇ) ಅಟಲ್‌ಜೀ ಜನಸ್ನೇಹಿ ಕೇಂದ್ರಗಳನ್ನು ಸರ್ಕಾರದ ಆದೇಶದಂತೆ ಪ್ರತಿ ಹೋಬಳಿಗೆ ಒಂದರಂತೆ ಮಂಜೂರು ಮಾಡಲಾಗಿರುತ್ತದೆ ಹಾಗೂ ನಾಡಕಛೇರಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಂದ 100 ಕ್ಕಿಂತ ಹೆಚ್ಚು ಅರ್ಜಿಗಳು ಸ್ವೀಕೃತವಾಗುತ್ತಿರುವ ನಾಡಕಛೇರಿಗಳಿಗೆ ಹೆಚ್ಚುವರಿ ಫ್ರಂಟ್ ಆಫೀಸ್‌ನ್ನು ಸ್ಥಾಪಿಸಲಾಗುತ್ತಿತ್ತು. ರಾಯಭಾಗ ಕಸಬಾ ಹೋಬಳಿಯಲ್ಲಿ ಪ್ರತಿ ದಿನಕ್ಕೆ ಸರಾಸರಿ 75 ಅರ್ಜಿಗಳು ಸ್ವೀಕೃತವಾಗುತ್ತಿದ್ದು, ಚಿಂಚಲಿ ಮತ್ತು ಕಂಕಣವಾಡಿ ಗ್ರಾಮಗಳು ರಾಯಭಾಗ ಹೋಬಳಿಯ ವ್ಯಾಪ್ತಿಯಲ್ಲಿದ್ದು, ಸದರಿ ಗ್ರಾಮಗಳಲ್ಲಿ ಹೆಚ್ಚುವರಿ ಫ್ರಂಟ್ ಆಫೀಸ್ ಸ್ಥಾಪಿಸುವ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.

ಕೆರೆಗಳಿಗೆ ನೀರು ತುಂಬುವ ಯೋಜನೆ

1025 (1745); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಜ್ಯದಲ್ಲಿ ಕೆರೆಗಳಿಗೆ ನೀರು ತುಂಬುವ ಯೋಜನೆ ಜಾರಿಯಲ್ಲಿದೆಯೇ;